# ಸಂವಿಧಾನದ ಆಶಯಗಳನ್ನು ಗೌರವಿಸೋಣ

## ಸಂವಿಧಾನ ದಿನಾಚರಣೆಯಲ್ಲಿ ನ್ಯಾಯಾಧೀಶ ಮಂಜುನಾಥ್



ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಡಾ। ರವೀಂದ್ರ ಉದ್ಘಾಟಿಸಿದರು.

**ಪುತ್ತೂರು** ನ. 26: ಜಾತ್ಯತೀತ ರಾಷ್ಟ್ರವಾಗಿರುವ ಭಾರತದಲ್ಲಿ ವಿವಿಧತೆಯಲ್ಲಿ ಏಕತೆಯನ್ನು ಕಂಡುಕೊಳ್ಳಲು ಸಂವಿಧಾನ ಪ್ರಮುಖ ಪಾತ್ರ ವಹಿಸಿದೆ. ಸಂವಿಧಾನದ ಆಶಯಗಳನ್ನು ಗೌರವಿಸುವುದು ಮತ್ತು ಕಾಪಾಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಪುತ್ತೂರು ಪ್ರಧಾನ ಹಿರಿಯ ವ್ಯಾವಹಾರಿಕ ನ್ಯಾಯಾಧೀಶ ಮಂಜುನಾಥ್ ಹೇಳಿದರು.

ಮೊಟ್ಟೆತ್ತಡ್ಕ ಗೇರು ಸಂಶೋಧನ ನಿರ್ದೇಶನಾಲಯದಲ್ಲಿ ಮಂಗಳವಾರ ಸಂವಿಧಾನ ದಿನಾಚರಣೆಯನ್ನು ಉದ್ಘಾಟಿಸಿದರು.

ಅತಿಥಿಗಳಾಗಿ ಪ್ರಧಾನ ಹಿರಿಯ ನ್ಯಾಯಾಧೀಶ ಪ್ರಕಾಶ್ ಪಿ.ಎಂ., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಉದಯ ಶಂಕರ್ ಶೆಟ್ಟಿ ಸಹಾಯಕ ಸರಕಾರಿ ಅಭಿಯೋಜಕ ಪ್ರವೀಣ್ ಕುಮಾರ್, ಪುತ್ತೂರು ಸ.ಪ್ರ.ದ. ಮಹಿಳಾ ಕಾಲೇಜಿನ ಪ್ರಾಂಶುಪಾಲ ಝೇವಿಯರ್ ಡಿ'ಸೋಜಾ ಭಾಗವಹಿಸಿದ್ದರು.

ಪುತ್ತೂರು ವಕೀಲರ ಸಂಘದ ಅಧ್ಯಕ್ಷ ಮನೋಹರ್ ಕೆ.ವಿ., ಸಂಘದ ಪದಾಧಿಕಾರಿಗಳಾದ ಸುರೇಶ್ ರೈ, ಮಂಜುನಾಥ್ ಎನ್.ಎಸ್., ಮಮತಾ ಸುವರ್ಣ ಉಪಸ್ಥಿತರಿದ್ದರು.

ಗೇರು ಸಂಶೋಧನ ನಿರ್ದೇಶನಾಲಯದ ನಿರ್ದೇಶಕ ಡಾ। ಎಂ.ಜಿ. ನಾಯಕ್ ಸ್ವಾಗತಿಸಿ, ಸಂವಿಧಾನ ದಿನಾಚರಣೆಯ ಪ್ರಯುಕ್ತ ಸಂಸ್ಥೆಯಲ್ಲಿ ಹಮ್ಮಿಕೊಂಡ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ಸಂವಿಧಾನದ ರಕ್ಷಣೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಗೇರು ಸಂಶೋಧನ ನಿರ್ದೇಶನಾಲಯದ ವಿಜ್ಞಾನಿ ಡಾ। ವನಿತಾ ಕೆ. ವಂದಿಸಿದರು. ಹಿರಿಯ ತಾಂತ್ರಿಕ ಅಧಿಕಾರಿ ಪ್ರಕಾಶ್ ಜಿ. ಭಟ್ ಕಾರ್ಯಕ್ರಮ ನಿರ್ವಹಿಸಿದರು.

### ವಿವಿಧತೆಯಲ್ಲಿ ಏಕತೆಯನ್ನು ಕಂಡುಕೊಳ್ಳಲು ಸಂವಿಧಾನ ಸಹಕಾರಿ

### ಪ್ರಪಂಚಕ್ಕೇ ಮಾದರಿ

ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ ವಿವೇಕಾನಂದ ಕಾನೂನು ವಿದ್ಯಾಲಯದ ನಿರ್ದೇಶಕ ಡಾ। ಬಿ.ಕೆ. ರವೀಂದ್ರ 'ಭಾರತದ ಸಂವಿಧಾನ ಮತ್ತು ಪ್ರಜೆಗಳ ಕರ್ತವ್ಯ' ಕುರಿತು ವಿಚಾರ ಮಂಡಿಸಿದರು. ಭಾರತದ ಸಂವಿಧಾನವು ಪ್ರಪಂಚಕ್ಕೇ ಮಾದರಿಯಾಗಿದ್ದು, ಪ್ರಜೆಗಳ ಮೂಲಭೂತ ಹಕ್ಕುಗಳ ಮತ್ತು ಕರ್ತವ್ಯಗಳಿಗೆ ಮಹತ್ವ ಕೊಟ್ಟಿದೆ. ಭಾರತದ ಸಂವಿಧಾನವು ಯಾವುದೇ ಭೇದ - ಭಾವ ಮಾಡದೇ ಸಮಾನ ನಾಗರಿಕ ಹಕ್ಕುಗಳನ್ನು ನೀಡಿದ್ದು ಅವುಗಳನ್ನು ಪಾಲಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.